ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರೈತರಿಗೆ ದರಖಾಸ್ತು ಮೂಲಕ ಮಂಜೂರಾಗಿರುವ ಜಮೀನನ್ನು ಅರಣ್ಯ ಇಲಾಖೆ ವಾಪಸ್ಸು ಕೋರುತ್ತಿರುವ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) -

1096 (1145) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ದರಖಾಸ್ತು ಮೂಲಕ ಮಂಜೂರಾಗಿರುವ ಹಲವು ಜಮೀನುಗಳು ಅರಣ್ಯ ಜಮೀನುಗಳಾಗಿರುತ್ತವೆಂದು ಸದರಿ ಜಮೀನುಗಳ ಮಂಜುರಾತಿಯನ್ನು ರದ್ದುಪಡಿಸಲು ಕೋರಿ ಅರಣ್ಯ ಇಲಾಖೆಯವರು ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅರಣ್ಯ ಇಲಾಖೆಯವರು 1917, 1920, 1930 ಸ್ವಾತಂತ್ರ್ಯ ಪೂರ್ವದಲ್ಲಿಯೇ ಹೊರಡಿಸಿದ ರಾಜ್ಯ ಪತ್ರದ ಪ್ರತಿಗಳನ್ನು ಕಳುಹಿಸಿ ಈಗ ದರಖಾಸ್ತು ಮೂಲಕ ಮಂಜೂರಾದ ಜಮೀನುಗಳು ಅರಣ್ಯ ಜಮೀನುಗಳೆಂದು ಜಮೀನುಗಳ ಮಂಜೂರಾತಿಯನ್ನು ರದ್ದು ಪಡಿಸಿ ಅರಣ್ಯ ಇಲಾಖೆಗೆ ಹಸ್ತಾಂತರಿಸಲು ಕೋರುತ್ತಿರುವ ಬಗ್ಗೆ ಸರ್ಕಾರದ ನಿಲುವೇನು;

(ಇ) ದರಖಾಸ್ತು ಮೂಲಕ ಜಮೀನು ಮಂಜೂರಾಗಿ ಈಗ ಅರಣ್ಯ ಜಮೀನೆಂದು ಮಂಜೂರಾತಿ ರದ್ದುಪಡಿಸಿದರೆ; ಜಮೀನು ಕಳೆದುಕೊಂಡ ಬಡ ರೈತಾಪಿ ಜನರಿಗೆ ಬದಲಿ ಜಮೀನು ನೀಡಲು ಸರ್ಕಾರ ತೀರ್ಮಾನ ಕೈಗೊಳ್ಳುವುದೇ?